## ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/87/2015-16 ದಿನಾಂಕ:03.05.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| 1.ಹೆಚ್.ಎಂ.ಜಯಮ್ಮ ಗಂಡ ಹೆಚ್.ಎಂ.ಸಿದ್ದಲಿಂಗಯ್ಯ ಗ್ರಾಮ:ಕೋಗಳಿ ತಾ:ಹೆಚ್.ಬಿ.ಹಳ್ಳಿ | 1.ಹೆಚ್.ಎಂ.ನಾಗರಾಜ ತಂದೆ ವಿಶ್ವನಾಥಯ್ಯ ಗ್ರಾಮ:-ಕೋಗಳಿ ತಾ:-ಹೆಚ್.ಬಿ.ಹಳ್ಳಿ |

**ವಿವಾದಿತ ಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಕೋಗಳಿ | 273/ಸಿ | 1-06 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೋಗಳಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೋಗಳಿ ಗ್ರಾಮದ ನಿವಾಸಿಯಾದ ಹೆಚ್.ಎಂ.ಜಯಮ್ಮ ಗಂಡ ಹೆಚ್.ಎಂ.ಸಿದ್ದಲಿಂಗಯ್ಯ ಇವರಿಗೆ ದಾನ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03219-2015-2016 ದಿನಾಂಕ:15.12.2015 ರಂದು ಹೆಚ್.ಎಂ.ಸಿದ್ದಲಿಂಗಯ್ಯ ಇವರು ದಾನಕ್ಕೆ ನೀಡಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:16.12.2015 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:04.01.2016 ರಂದು ಹೆಚ್.ಎಂ.ನಾಗರಾಜ ತಂದೆ ವಿಶ್ವನಾಥಯ್ಯ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.25/15-16 ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿ:04.03.2016 ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:04.03.2016 ರಿಂದ 03.05.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯ ಪಕ್ಷಕಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನು ನೋಂದಾಯಿತ ದಾನಪತ್ರವಾಗಿರುವುದರಿಂದ ಹಾಗೂ ನಮ್ಮ ಯಜಮಾನ(ಗಂಡ) ಹೆಸರಿಗೆ ಪಟ್ಟಾ ಇರುತ್ತದೆ. ದಾನ ಪ್ರಕಾರ ನನ್ನ ಹೆಸರಿಗೆ ಹಕ್ಕು ಬದಲಾವಣೆಯನ್ನು ಮಾಡಲು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ತಕರಾರುದಾರರು ಹೇಳುವಂತೆ; ಸದರಿ ಜಮೀನಿನಲ್ಲಿ ನಮಗೆ 0-50 ಸೆಂಟ್ಸ್ ಜಮೀನು ಬರಬೇಕೆಂದು ಹೇಳಿಕೆಯನ್ನು ನೀಡಿರುತ್ತಾರೆ.

ಮುಂದುವರೆದು ಪಟ್ಟಾದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನು ಸ್ವಯ. ರ್ಜಿತ ಜಮೀನಾಗಿರುತ್ತದೆ. ಸದರಿ ಜಮೀನು ನನ್ನ ಹೆಂಡತಿಗೆ ದಾನ ಮಾಡಿರುವುದಾಗಿ ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಸದರಿ ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆಮಾಡಲಾಗಿ, ದಾನ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03219-2015-2016 ದಿನಾಂಕ:15.12.2015 ರನ್ವಯ ಅರ್ಜಿದಾರರ ಹೆಸರಿಗೆ ದಾನ ಪ್ರಕಾರ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಮತ್ತು ಎಂ.ಆರ್.ನಂ.25/2015-16 ರ ಪ್ರಕಾರ, ಹಾಗೂ ದಾನ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03219-2015-2016 ದಿನಾಂಕ:15.12.2015 ರನ್ವಯ ಕೋಗಳಿ ಗ್ರಾಮದ ಸ.ನಂ. 273/ಸಿ ವಿಸ್ತೀರ್ಣ 1-06 ಎಕರೆ ಜಮೀನು ಅರ್ಜಿದಾರರಾದ ಹೆಚ್.ಎಂ.ಜಯಮ್ಮ ಗಂಡ ಹೆಚ್.ಎಂ.ಸಿದ್ದಲಿಂಗಯ್ಯ, ಕೋಗಳಿ ಇವರ ಹೆಸರಿಗೆ ದಾನ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:03.05.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

3/5/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರ್,
ನಾಡ ಕಾರ್ಯಾಲಯ, ಕೋಗಳಿ
ಕೋಗಳಿ.

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಶುದ್ಧಪ್ರತಿ ಕಡತಕ್ಕೆ.

H.M ಸಿದ್ಧಲಿಂಗಯ್ಯ 10.5.2016.

20/5/16